# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2022-23ನೇ ಸಾಲಿನಲ್ಲಿ ಗದಗಿನ ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ವಿಶ್ವವಿದ್ಯಾಲಯಕ್ಕೆ ನಿಗಧಿಪಡಿಸಿರುವ ಅನುದಾನದಲ್ಲಿ ಮೊದಲನೇ ಮತ್ತು ಎರಡನೇ ತ್ರೈಮಾಸಿಕ ಕಂತಿನ ಅನುದಾನವನ್ನು ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ:

1. ಕುಲಸಚಿವರು, ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ವಿಶ್ವವಿದ್ಯಾಲಯ , ಗದಗ ಇವರ ಪತ್ರ ಸಂಖ್ಯೆ:ಆರ್‌ಡಿಪಿಆರ್‌ಯು 01 ಹಣಕಾ 2022, ದಿನಾಂಕ:18-04-2022.
2. ಸರ್ಕಾರದ ಆದೇಶ ಸಂ:ಎಫ್‌ಡಿ 01 ಟಿಎಫ್‌ಪಿ 2022, ದಿನಾಂಕ:04-04-2022.

ಪ್ರಸ್ತಾವನೆ:

ಮೇಲೆ ಓದಲಾದ(1)ರ ಪತ್ರದನ್ವಯ 2022-23ನೇ ಸಾಲಿನ ಆಯವ್ಯಯದಲ್ಲಿ ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ವಿಶ್ವವಿದ್ಯಾಲಯ, ಗದಗ ಇವರಿಗೆ ಈ ಕೆಳಕಂಡ ಕೋಷ್ಟಕದಲ್ಲಿ ನಮೂದಿಸಿರುವ ವಿವಿಧ ಲೆಕ್ಕ ಶೀರ್ಷಿಕೆಗಳಡಿ ಆಯವ್ಯಯದಲ್ಲಿ ಒದಗಿಸಿರುವ ಅನುದಾನದಲ್ಲಿ ಮೊದಲನೇ ಕಂತಿನ ಅನುದಾನವನ್ನು ಬಿಡುಗಡೆಗೊಳಿಸುವಂತೆ ಕುಲಸಚಿವರು, ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ವಿಶ್ವವಿದ್ಯಾಲಯ, ಗದಗ ಇವರು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

(ರೂ. ಲಕ್ಷಗಳಲ್ಲಿ)

| . ಸಂ | ಲೆಕ್ಕಶೀರ್ಷಿಕೆ | ಆಯವ್ಯಯದಲ್ಲಿ ಒದಗಿಸಿರಿವ ಅನುದಾನ | ಮೊದಲ ತ್ರೈಮಾಸಿಕ ಅನುದಾನದ ಕೋರಿಕೆ |
|---|---|---|---|
| 1. | 2515-00-102-0-13-101<br>ಅಧಿಕಾರಿಗಳ ವೇತನ ಹಾಗೂ ಭತ್ಯೆಗಳಿಗಾಗಿ | 198.00 | 49.50 |
| 2 | 2515-00-102-0-13-115<br>ಗುತ್ತಿಗೆ/ಹೊರ ಗುತ್ತಿಗೆ ನೌಕರರ ವೇತನಕ್ಕಾಗಿ | 50.00 | 12.50 |
| 3 | 2515-00-102-0-13-103<br>ಸಾಮಾನ್ಯ ವೆಚ್ಚಗಳಿಗಾಗಿ | 10.00 | 2.50 |
| 4 | 4515-00-101-0-01-132<br>ಬಂಡವಾಳ ವೆಚ್ಚಗಳಿಗಾಗಿ | 800.00 | 200.00 |
| | ಒಟ್ಟು | 1058.00 | 264.50 |

2022-23ನೇ ಸಾಲಿನಲ್ಲಿ ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ವಿಶ್ವವಿದ್ಯಾಲಯಕ್ಕೆ ಮೇಲ್ಕಂಡ ಲೆಕ್ಕ ಶೀರ್ಷಿಕಗಳಡಿ ರೂ.1058.00ಲಕ್ಷಗಳನ್ನು ನಿಗಧಿಪಡಿಸಲಾಗಿರುತ್ತದೆ.

ಮೇಲೆ ಓದಲಾದ(2)ರ ಸರ್ಕಾರದ ಆದೇಶ ಸಂ:ಎಫ್‌ಡಿ 01 ಟಿಎಫ್‌ಪಿ 2022, ದಿನಾಂಕ: 04-04-2022ರಲ್ಲಿ ಮೊದಲನೇ ಮತ್ತು ಎರಡನೇ ಕಂತಿನ ಹಣ ಬಿಡುಗಡೆಗೆ ಎಲ್ಲಾ ಆಡಳಿತ ಇಲಾಖೆಗಳ

ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ/ಅಪರ ಮುಖ್ಯ ಕಾರ್ಯದರ್ಶಿಗಳಿಗೆ ಆರ್ಥಿಕ ಅಧಿಕಾರ ಪ್ರತ್ಯಾಯೋಜಿಸಲಾಗಿರುತ್ತದೆ.

ಅದರಂತೆ, ಮೇಲೆ ಓದಲಾದ(1)ರ ಪತ್ರದಲ್ಲಿ ಕುಲಸಚಿವರು, ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ವಿಶ್ವವಿದ್ಯಾಲಯ, ಗದಗ ಇವರು ಕೋರಲಾದಂತೆ, 2022-23ನೇ ಸಾಲಿನ ಆಯವ್ಯಯದಲ್ಲಿ ನಿಗಧಿಪಡಿಸಲಾದ ರೂ.1058.00ಲಕ್ಷಗಳ ಅನುದಾನದಲ್ಲಿ ಸರ್ಕಾರದ ಆದೇಶ ಸಂ:ಎಫ್‌ಡಿ 01 ಟಿಎಫ್‌ಪಿ 2022, ದಿನಾಂಕ:04-04-2022ರನ್ವಯ ಮೊದಲನೇ ಕಂತಿನ (ಏಪ್ರಿಲ್, ಮೇ & ಜೂನ್-2022) ಹಾಗೂ ಎರಡನೇ ಕಂತಿನ (ಜುಲೈ, ಆಗಸ್ಟ್ & ಸೆಪ್ಟೆಂಬರ್-2022) ಅನುದಾನವಾಗಿ ರೂ.329.00 (ಮೂರು ನೂರ ಇಪ್ಪತ್ತೊಂಭತ್ತು ಲಕ್ಷ ರೂಪಾಯಿಗಳು ಮಾತ್ರ)ಲಕ್ಷಗಳನ್ನು ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ವಿಶ್ವವಿದ್ಯಾಲಯಕ್ಕೆ ಬಿಡುಗಡೆಗೊಳಿಸಬಹುದಾಗಿರುತ್ತದೆ. ಆದುದರಿಂದ, ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪಂರಾ 214 ಜಿಪಸ 2022, ಬೆಂಗಳೂರು, ದಿನಾಂಕ:13-05-2022**

ಮೇಲೆ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2022-23ನೇ ಸಾಲಿನಲ್ಲಿ ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ವಿಶ್ವವಿದ್ಯಾಲಯಕ್ಕೆ ಈ ಕೆಳಕಂಡ ಕೋಷ್ಠಕದಲ್ಲಿ ನಮೂದಿಸಿರುವ ವಿವಿಧ ಲೆಕ್ಕ ಶೀರ್ಷಿಕೆಗಳಡಿ ನಿಗಧಿಪಡಿಸಿರುವ ಅನುದಾನದಲ್ಲಿ ಮೊದಲನೇ ಕಂತಿನ (ಏಪ್ರಿಲ್, ಮೇ & ಜೂನ್-2022) ಹಾಗೂ ಎರಡನೇ ಕಂತಿನ (ಜುಲೈ, ಆಗಸ್ಟ್ & ಸೆಪ್ಟೆಂಬರ್-2022) ಅನುದಾನವಾಗಿ ರೂ.329.00 (ಮೂರು ನೂರ ಇಪ್ಪತ್ತೊಂಭತ್ತು ಲಕ್ಷ ರೂಪಾಯಿಗಳು ಮಾತ್ರ)ಲಕ್ಷಗಳನ್ನು ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ವಿಶ್ವವಿದ್ಯಾಲಯಕ್ಕೆ ಬಿಡುಗಡೆಗೊಳಿಸಿ ಆದೇಶಿಸಿದೆ.

(ರೂ. ಲಕ್ಷಗಳಲ್ಲಿ)

| ಕ್ರ. ಸಂ | ಲೆಕ್ಕಶೀರ್ಷಿಕೆ | ಆಯವ್ಯಯದಲ್ಲಿ ಒದಗಿಸಿರಿವ ಅನುದಾನ | ಮೊದಲ ತ್ರೈಮಾಸಿಕ ಅನುದಾನದ ಕೋರಿಕೆ | ಬಿಡುಗಡೆ ಮಾಡಬಹು ದಾದ ಮೊತ್ತ | ಷರಾ |
|---|---|---|---|---|---|
| 1. | 2515-00-102-0-13-101 ಅಧಿಕಾರಿಗಳ ವೇತನ ಹಾಗೂ ಭತ್ಯೆಗಳಿಗಾಗಿ | 198.00 | 49.50 | 99.00 | ಮೊದಲ ಹಾಗೂ ಎರಡನೇ ತ್ರೈಮಾಸಿಕ ಅನುದಾನ |
| 2 | 2515-00-102-0-13-115 ಗುತ್ತಿಗೆ/ಹೊರ ಗುತ್ತಿಗೆ ನೌಕರರ ವೇತನಕ್ಕಾಗಿ | 50.00 | 12.50 | 25.00 | |
| 3 | 2515-00-102-0-13-103 ಸಾಮಾನ್ಯ ವೆಚ್ಚಗಳಿಗಾಗಿ | 10.00 | 2.50 | 5.00 | |
| 4 | 4515-00-101-0-01-132 ಬಂಡವಾಳ ವೆಚ್ಚಗಳಿಗಾಗಿ | 800.00 | 200.00 | 200.00 | ಮೊದಲ ತ್ರೈಮಾಸಿಕ ಅನುದಾನ |
| | ಒಟ್ಟು | **1058.00** | **264.50** | **329.00** | |

ಈ ಆದೇಶವನ್ನು ಇಲಾಖಾ ಆಂತರಿಕ ಆರ್ಥಿಕ ಸಲಹೆಗಾರರ ಸಹಮತಿಯನ್ವಯ ಹಾಗೂ ಸರ್ಕಾರದ ಆದೇಶ ಸಂ:ಎಫ್‌ಡಿ 01 ಟಿಎಫ್‌ಪಿ 2022, ದಿನಾಂಕ:04-04-2022ರಲ್ಲಿ ಆಡಳಿತ ಇಲಾಖೆಗಳ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ/ಅಪರ ಮುಖ್ಯ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

13/5/22

(ಎಂ.ಎಂ.ರಾಜು)
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

13/5/2022

ಇವರಿಗೆ:

1. ಪ್ರಧಾನ ಮಹಾಲೇಖಪಾಲರು (ಜಿ ಅಂಡ್ ಎಸ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ (ಪಿ.ಬಿ.ನಂ.5398) ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು (ಇ ಅಂಡ್ ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ (ಪಿ.ಬಿ.ನಂ.5398) ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (ಎ ಅಂಡ್ ಇ), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ (ಪಿ.ಬಿ.ನಂ.5329) ಬೆಂಗಳೂರು.
4. ಕುಲಸಚಿವರು, ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ವಿಶ್ವವಿದ್ಯಾಲಯ, ಗದಗ.
5. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು.
6. ಯೋಜನಾ ನಿರ್ದೇಶಕರು(ಖಜಾನೆ-2), ವಾಣಿಜ್ಯ ತೆರಿಗೆ ಇಲಾಖೆ ಕಟ್ಟಡ, 7ನೇ ಮಹಡಿ, ಗಾಂಧಿನಗರ, ಬೆಂಗಳೂರು.
7. ಉಪ ನಿರ್ದೇಶಕರು, ಜಿಲ್ಲಾ ಖಜಾನೆ, ಗದಗ.
8. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಬೆಂಗಳೂರು.
9. ಕರ್ನಾಟಕ ವಿಕಾಸ ಮಾಸ ಪತ್ರಿಕೆಯಲ್ಲಿ ಪ್ರಕಟಿಸಲು/ಇಲಾಖಾ ವೆಬ್ ಸೈಟ್‌ನಲ್ಲಿ ಅಳವಡಿಸಲು.
10. ಹೆಚ್ಚುವರಿ ಪ್ರತಿ/ಶಾಖಾ ರಕ್ಷಾ ಕಡತ.

ಪ್ರತಿಯನ್ನು ಮಾಹಿತಿಗಾಗಿ:-

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಹಿರಿಯ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಜಂಟಿ ಕಾರ್ಯದರ್ಶಿ(ಜಿ.ಪಂ), ಗ್ರಾ.ಅ.ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕ, ಬಹುಮಹಡಿಗಳ ಕಟ್ಟಡ, ಬೆಂಗಳೂರು.